**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್., ಇವರ ಶೂನ್ಯವೇಳೆಯಲ್ಲಿನ ಪ್ರಸ್ತಾವನೆಗೆ ಉತ್ತರ.**

**ವಿಷಯ:**

ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಸತಿ ನಿಲಯಗಳಲ್ಲಿ ಸೂಕ್ತ ಸಿಬ್ಬಂದಿ ಮತ್ತು ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿದ್ದು, ಕೂಡಲೇ ತಹಶೀಲ್ದಾರ್, ಉಪವಿಭಾಗಾಧಿಕಾರಿಗಳು ಅನಿರೀಕ್ಷಿತ ಭೇಟಿ ನೀಡಿ ಕ್ರಮ ಕೈಗೊಳ್ಳುವ ಬಗ್ಗೆ.

**ಉತ್ತರ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1226 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 680 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ, ವಿವರ ಕೆಳಕಂಡಂತಿದೆ.

| ಕ್ರ. ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | | |
|---|---|---|---|---|
| | | ಬಾಲಕ | ಬಾಲಕಿ | ಒಟ್ಟು |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 927 | 299 | 1226 |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು | 399 | 281 | 680 |
| | **ಒಟ್ಟು :-** | **1326** | **580** | **1906** |

ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿನ ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆಗಾಗಿ ಈ ಕೆಳಕಂಡಂತೆ ಸಿಬ್ಬಂದಿಯನ್ನು ಸೃಜಿಸಲಾಗಿರುತ್ತದೆ.

| ಕ್ರ.ಸಂ. | ಹುದ್ದೆಯ ಹೆಸರು | ಮಂಜೂರಾತಿ | ಭರ್ತಿ | ಖಾಲಿ |
|---|---|---|---|---|
| 1 | ಸೀನಿಯರ್ ವಾರ್ಡನ್ | 61 | 58 | 3 |
| 2 | ವಾರ್ಡನ್ | 1829 | 1284 | 545 |
| 3 | ಜೂನಿಯರ್ ವಾರ್ಡನ್ | 518 | 465 | 53 |
| | **ಒಟ್ಟು:-** | **2408** | **1807** | **601** |

ವಾರ್ಡನ್ ಹುದ್ದೆಗೆ ಸಂಬಂಧಿಸಿದಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಇದ್ದ 232 ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

253 ವಾರ್ಡನ್ ಹುದ್ದೆಗಳನ್ನು ವಸತಿ ಶಾಲಾ ಶಿಕ್ಷಕರು'ಮತ್ತು ಜೂನಿಯರ್ ವಾರ್ಡನ್ ಹುದ್ದೆಯ ನೌಕರರುಗಳಿಂದ ಅರ್ಹ ನೌಕರರುಗಳು ಲಭ್ಯವಾದ ನಂತರದಲ್ಲಿ ಮುಂಬಡ್ತಿ ಮುಖೇನ ಭರ್ತಿ ಮಾಡಬೇಕಾಗಿರುತ್ತದೆ.

03 ಸೀನಿಯರ್ ವಾರ್ಡನ್ ಹುದ್ದೆಗಳನ್ನು ವಾರ್ಡನ್ ಹುದ್ದೆಯ ನೌಕರರುಗಳಿಂದ ಬಡ್ತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದೆ.

53 ಜೂನಿಯರ್ ವಾರ್ಡನ್ ಹುದ್ದೆಗಳನ್ನು ಗ್ರೂಪ್-ಡಿ ವೃಂದದ ಅಡುಗೆಯವರಿಂದ ಭರ್ತಿ ಮಾಡಬೇಕಾಗಿದ್ದು ಅರ್ಹ ನೌಕರರುಗಳು ಲಭ್ಯವಾದ ನಂತರದಲ್ಲಿ ಮುಂಬಡ್ತಿ ಮುಖೇನ ಭರ್ತಿ ಮಾಡಬೇಕಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶೀಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಭೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಉಪ ವಿಭಾಗಾಧಿಕಾರಿಗಳು ಹಾಗೂ ತಾಲ್ಲೂಕಿನ ತಹಶೀಲ್ದಾರ್ ರವರಿಗೆ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚನೆ ನೀಡಲು ಕೋರಲಾಗಿದೆ. ಈ ಬಗ್ಗೆ ಜಿಲ್ಲೆಗಳಿಂದ ವಿವರ ಪಡೆಯಲು ಕ್ರಮವಹಿಸಲಾಗುತ್ತಿದೆ.

ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.

ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

**ಸಕಇ 438 ಪಕವಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**